## ಪತ್ರಿಕಾ ತುಣುಕುಗಳು
## PAPER CLIPPINGS

8

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE : 19/9/2020

# ಕಲಾಪಕ್ಕೆ ಕೊರೊನಾ ಸೋಂಕು ಪರೀಕ್ಷೆ ಕಡ್ಡಾಯ

19/9/20

ಬೆಂಗಳೂರು: ಸೆ. 21 ರಿಂದ ಆರಂಭವಾಗುವ ವಿಧಾನ ಪರಿಷತ್ ಕಲಾಪದಲ್ಲಿ ಪಾಲ್ಗೊಳ್ಳಲು ಎಲ್ಲ ಸದಸ್ಯರು ಆರ್‌ಟಿ-ಪಿಸಿಆರ್ ತಪಾಸಣೆ ಮಾಡಿಸಿಕೊಳ್ಳುವುದು ಕಡ್ಡಾಯ ಎಂದು ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕೊರೊನಾ ಸೋಂಕಿನ ಹಿನ್ನೆಲೆಯಲ್ಲಿ ಎಲ್ಲ ಸದಸ್ಯರಿಗೂ ತಪಾಸಣೆ ಕಡ್ಡಾಯಗೊಳಿಸಿದ್ದು, ಸದಸ್ಯರ ಆರೋಗ್ಯದ ದೃಷ್ಟಿಯಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಪ್ರತಿದಿನ ಸದನವನ್ನು ಸ್ಯಾನಿಟೈಸ್ ಮಾಡುವುದು, ಸದಸ್ಯರಿಗೆ ಕಡ್ಡಾಯವಾಗಿ ಫೇಸ್ ಮಾಸ್ಕ್ ಹಾಗೂ ಸ್ಯಾನಿಟೈಸರ್ ನೀಡಲಾಗುವುದು ಎಂದರು. ವಿಧಾನ ಸಭೆಯಿಂದ ಅಂಗೀಕಾರಗೊಂಡಿರುವ 9 ವಿಧೇಯಕಗಳು ಪರಿಷತ್ತಿನಲ್ಲಿ ಬಾಕಿ ಉಳಿದಿವೆ. ಅವುಗಳಲ್ಲಿ 2 ವಿಧೇಯಕಗಳಿಗೆ ಸುಗ್ರೀವಾಜ್ಞೆ ಹೊರಡಿಸಲಾಗಿದ್ದು ಅವುಗಳನ್ನು ಹಿಂಪಡೆಯಲಾಗುವುದು. ಬಸವರಾಜ ಹೊರಟ್ಟಿ ಹಾಗೂ ರಘು ಆಚಾರ್ ಅವರ ಖಾಸಗಿ ವಿಧೇಯಕಗಳ ಮಂಡನೆಗೆ ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.